ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

19

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 5/1/2021

## ಕಾರ್ಯಕಾರಿಣಿ ಸಭೆಯಲ್ಲಿ ಬಿಎಸ್‌ವೈ ಬೆಂಬಲಕ್ಕೆ ನಾಯಕರು

# ಸಿಎಂ ಕುರ್ಚಿ ಭದ್ರ

5/1/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮುಖ್ಯಮಂತ್ರಿ ಪದಚ್ಯುತಿ ಬಗ್ಗೆ ಕೇಳಿಬರುತ್ತಿದ್ದ ಸುದ್ದಿಗಳಿಗೆ ಬಿಜೆಪಿ ವರಿಷ್ಠರು ಸಂಪೂರ್ಣ ಬ್ರೇಕ್ ಹಾಕಿದ್ದಾರೆ. ಈ ರೀತಿಯ ಹೇಳಿಕೆಗಳನ್ನು ನೀಡಿದರೆ ಕಠಿಣ ಕ್ರಮದ ಎಚ್ಚರಿಕೆಯನ್ನು ರವಾನಿಸುವ ಮೂಲಕ, ಮುಖ್ಯಮಂತ್ರಿ ಯಡಿಯೂರಪ್ಪ ಅವರ ಕುರ್ಚಿ ಭದ್ರವಾಗಿರಿಸಿದ್ದಾರೆ.

ಶಿವಮೊಗ್ಗದಲ್ಲಿ ನಡೆದ ವಿಶೇಷ ಕಾರ್ಯಕಾರಿಣಿ ಸಭೆ ಹಾಗೂ ಕೋರ್ ಕಮಿಟಿ ಸಭೆಯಲ್ಲಿ ನಡೆದ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸಿದರೆ, ಪಕ್ಷದ ವರಿಷ್ಠರು ಬಿಜೆಪಿ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಮೂಲಕ ಯಡಿಯೂರಪ್ಪ ಅವರೇ ಮುಂದಿನ ಅವಧಿಗೆ ಮುಖ್ಯಮಂತ್ರಿ ಎನ್ನುವ ಸಂದೇಶವನ್ನು ರವಾನಿಸಿರುವಂತಿದೆ. ಶಿವಮೊಗ್ಗದಲ್ಲಿ ಯಡಿಯೂರಪ್ಪ ಆಪ್ತರ ಗುಂಪು ಯತ್ನಾಳ್ ವಿರುದ್ಧ ದೂರು ನೀಡುತ್ತಿದ್ದಂತೆ, ಅವರ ವಿರುದ್ಧ ಕ್ರಮವಹಿಸುವಂತೆ ಅರುಣ್ ಸಿಂಗ್ ಸೂಚನೆ ನೀಡಿದ್ದಾರೆ. ಅರುಣ್ ಸಿಂಗ್ ಅವರ ಈ ನಡೆ ಯಡಿಯೂರಪ್ಪ ಅವರ ಬಲವನ್ನು ಹೆಚ್ಚಿಸಿದೆ ಎನ್ನುವ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬಂದಿವೆ.

**ಸಿಂಗ್‌ಗೆ ವರಿಷ್ಠರ ನಿರ್ದೇಶನ:** ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಕ್ರಮವಹಿಸುವುದಕ್ಕೆ ಈ ಹಿಂದೆಯೂ ಮಾತುಗಳು ಕೇಳಿಬಂದಾಗ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಅವರು ಮೌನಕ್ಕೆ ಶರಣಾಗಿದ್ದರು. ಕಟೀಲ್ ಅವರ ಈ ನಡೆಯ ಹಿಂದೆ ಕೆಲ ದೆಹಲಿ ನಾಯಕರಿದ್ದಾರೆ ಎನ್ನುವ ಮಾತುಗಳು ಕೇಳಿಬಂದಿದ್ದವು. ಆದರೀಗ ಅರುಣ್ ಸಿಂಗ್ ಅವರೇ ನೇರವಾಗಿ ಕಟೀಲ್ ಅವರಿಗೆ ಯತ್ನಾಳ್ ವಿರುದ್ಧ ನೋಟಿಸ್ ನೀಡುವಂತೆ ಸೂಚನೆ ನೀಡಿರುವುದನ್ನು ಗಮನಿಸಿದರೆ, ಸಿಂಗ್‌ಗೆ ವರಿಷ್ಠರ ನಿರ್ದೇಶನವಿರುವುದು ಸ್ಪಷ್ಟವಾಗಲಿದೆ.

→10



### ಯಡಿಯೂರಪ್ಪ ಅವರನ್ನು ಮುಂದುವರಿಸಲು ಕಾರಣವೇನು?

- ಅವಧಿಗೆ ಮೊದಲು ಸ್ಥಾನದಿಂದ ಇಳಿಸಿದರೆ ಪಕ್ಷಕ್ಕೆ ಹೊಡೆತ
- ಲಿಂಗಾಯತ ಸಮುದಾಯ ಬಿಜೆಪಿಯಿಂದ ದೂರ ಹೋಗುವ ಆತಂಕ
- ಕರೋನಾ ಸಮಯದಲ್ಲಿ ಉತ್ತಮ ನಿರ್ವಹಣೆ ಬಳಿಕ, ಈ ರೀತಿ ಮಾಡಿದರೆ ಸಾರ್ವಜನಿಕರಿಂದ ಟೀಕೆ
- ಯಡಿಯೂರಪ್ಪ ಅವರನ್ನು ಬಳಸಿಕೊಂಡು 2023ರಲ್ಲಿ ಮತ್ತೊಮ್ಮೆ ಅಧಿಕಾರಕ್ಕೆ ಬರುವ ಪ್ಲ್ಯಾನ್
- ಮುಂದಿನ ಎರಡೂವರೆ ವರ್ಷದ ಅವಧಿಯಲ್ಲಿ ಭವಿಷ್ಯದ ನಾಯಕನ ಹುಡುಕಾಟ
- ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿಯಲ್ಲಿ ಸಮಸ್ಯೆಯಾಗದಿರಲಿ ಎನ್ನುವ ಕಾರಣ

## ಯತ್ನಾಳ್ ವಿರುದ್ಧ ಕೇಂದ್ರಕ್ಕೆ ಶಿಫಾರಸು

ಯಡಿಯೂರಪ್ಪ ಅವರ ಸ್ಥಾನಪಲ್ಲಟದ ಬಗ್ಗೆ ಪದೇಪದೆ ಹೇಳಿಕೆ ನೀಡುವ ಮೂಲಕ ಹಲವರ ಕೆಂಗಣ್ಣಿಗೆ ತುತ್ತಾಗಿರುವ ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ನೋಟಿಸ್ ನೀಡಲು ಕೇಂದ್ರ ಶಿಸ್ತು ಸಮಿತಿಗೆ ಶಿಫಾರಸು ಮಾಡಲು ರಾಜ್ಯ ಬಿಜೆಪಿ ನಿರ್ಧರಿಸಿದೆ. ಶಿವಮೊಗ್ಗದಲ್ಲಿ ನಡೆದ ಕಾರ್ಯಕಾರಿಣಿ ಹಾಗೂ ಕೋರ್ ಕಮಿಟಿ ಸಭೆಯಲ್ಲಿ, ಯತ್ನಾಳ್ ವಿರುದ್ಧ ಹಲವು ದೂರುಗಳು ಕೇಳಿಬಂದಿದ್ದವು. ಈ ಹಿನ್ನೆಲೆಯಲ್ಲಿ ಯತ್ನಾಳ್ ಅವರ ವಿರುದ್ಧ ಉಚ್ಚಾಟನೆಯ ಶಿಕ್ಷೆ ನೀಡಬೇಕು ಎನ್ನುವ ಮಾತುಗಳು ಕೇಳಿಬಂದವು. ಆದರೆ, ಈ ಎಲ್ಲ ವಿಷಯದ ಬಗ್ಗೆ ಯಾವ ರೀತಿಯ ತೀರ್ಮಾನ ಕೈಗೊಳ್ಳಬೇಕು ಎನ್ನುವ ತೀರ್ಮಾನವನ್ನು ಬಿಜೆಪಿ ಕೇಂದ್ರ ಶಿಸ್ತು ಸಮಿತಿ ತೆಗೆದುಕೊಳ್ಳಲಿ ಎಂದು ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ನಿರ್ಧರಿಸಿದ್ದಾರೆ. ಆದ್ದರಿಂದ ಯತ್ನಾಳ್ ವಿರುದ್ಧ ನೋಟಿಸ್ ಜಾರಿಗೊಳಿಸುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲು ಮುಂದಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಸಿಎಂ ಕುರ್ಚಿ ಭದ್ರ?

← ಮೊದಲಪುಟದಿಂದ

**ಉಸ್ತುವಾರಿ ಅರುಣ್ ಸಿಂಗ್ ಬೆಂಬಲ:** ಶಿವಮೊಗ್ಗದಲ್ಲಿ ನಡೆದ ಕಾರ್ಯಕಾರಿಣಿ ಸಭೆ ಹಾಗೂ ಕೋರ್ ಕಮಿಟಿ ಸಭೆಯಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಬಿಜೆಪಿ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಸಂಪೂರ್ಣ ಬೆಂಬಲ ನೀಡಿದ್ದಾರೆ. ರಾಜ್ಯದಲ್ಲಿ ಮುಂದಿನ ಎರಡೂವರೆ ವರ್ಷ ಯಡಿಯೂರಪ್ಪ ಅವರೇ ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರಿಯಲಿದ್ದಾರೆ. ಈ ವಿಷಯದಲ್ಲಿ ವರಿಷ್ಠರು ಸ್ಪಷ್ಟ 'ತೀರ್ಮಾನವನ್ನು ಕೈಗೊಂಡಿದ್ದಾರೆ. ಆದ್ದರಿಂದ ಯಾವುದೇ ಕಾರಣಕ್ಕೂ ಯಡಿಯೂರಪ್ಪ ಅಥವಾ ಸರಕಾರಕ್ಕೆ ಮುಜುಗರ ತರುವ ಕೆಲಸವನ್ನು ಮಾಡದಂತೆ ಖಡಕ್ ಎಚ್ಚರಿಕೆ ನೀಡಿದ್ದಾರೆ ಎಂದು ಮೂಲಗಳಿಂದ ತಿಳಿದುಬಂದಿದೆ.